# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 25.06.2011

ಕರ್ನಾಟಕ ಉಚ್ಚ ನ್ಯಾಯಾಲಯವು ಕೆರೆ ಅಭಿವೃದ್ಧಿ ಕುರಿತು ರಚಿಸಿದ ಉನ್ನತ ಮಟ್ಟದ ಸಮಿತಿಯ ಅಧ್ಯಕ್ಷರಾದ ನ್ಯಾಯಮೂರ್ತಿ ಶ್ರೀ ಎನ್.ಕೆ. ಪಾಟೀಲ್ ರವರು ಇಂದು ಹೇರೋಹಳ್ಳಿ, ಅಂಧ್ರಹಳ್ಳಿ ಮತ್ತು ಲಿಂಗದೇಹಳ್ಳಿ ಕೆರೆಗಳಿಗೆ ಭೇಟಿ ನೀಡಿ, ಪ್ರಗತಿ ಪರಿಶೀಲನೆ ನಡೆಸಿದರು.

ಉನ್ನತ ಮಟ್ಟದ ಸಮಿತಿಯು ಕೆರೆಗಳ ಅಭಿವೃದ್ಧಿ ವಿಷಯವನ್ನು ಬಹಳ ಗಂಭೀರವಾಗಿ ಪರಿಗಣಿಸಿದ್ದು, ಪ್ರತಿ ಕೆರೆಯಲ್ಲಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳ ಕುರಿತು ಪ್ರಗತಿಯ ವರದಿಯನ್ನು ಕೂಡಲೇ ಸಮಿತಿಗೆ ಸಲ್ಲಿಸಲು ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು.

ಬಿಬಿಎಂಪಿ ಮತ್ತು ಬಿಡಿಎ ಆಯುಕ್ತರೊಂದಿಗೆ ಹೇರೋಹಳ್ಳಿ ಕೆರೆಗೆ ಭೇಟಿ ನೀಡಿದ ನ್ಯಾಯಮೂರ್ತಿಗಳು ಕೆರೆ ಅಭಿವೃದ್ಧಿಯನ್ನು ನೋಡಿ ಸಂತಸ ವ್ಯಕ್ತಪಡಿಸಿ ಇದೇ ಮಾದರಿಯಲ್ಲಿ ಉಳಿದ ಎಲ್ಲಾ ಕೆರೆಗಳು ಅಭಿವೃದ್ಧಿಗೊಳ್ಳಬೇಕೆಂದು ತಿಳಿಸಿದರು. ಕೆರೆಯ ಸುತ್ತಲು ಹೆಚ್ಚು ಹೆಚ್ಚು ಗಿಡಗಳನ್ನು ನೆಡಲು ತಿಳಿಸಿದರು. ಈಗಿನಿಂದಲೇ ಮರಗಳನ್ನು ಬೆಳೆಸುವುದಕ್ಕೆ ಗಮನಹರಿಸುವುದು ಅತ್ಯವಶ್ಯಕವಾಗಿದೆ. ಮುಂಬರುವ ದಿನಗಳಲ್ಲಿ ದೊಡ್ಡ ಮರಗಳಾಗಿ ಬೆಳೆದು ಮುಂದಿನ ಜನಾಂಗಕ್ಕೆ ಉತ್ತಮ ಪರಿಸರ ದೊರಕಲಿದೆ ಎಂದು ತಿಳಿಸಿದರು.

ಹೇರೋಹಳ್ಳಿ ಕೆರೆಗೆ ಸೇರುವ ಕೊಳಚೆ ನೀರನ್ನು ಶುದ್ಧೀಕರಿಸಿ ಕೆರೆಗೆ ಬಿಡಲು 10 ದಶಲಕ್ಷ ಲೀಟರ್ ಸಾಮರ್ಥ್ಯಯುಳ್ಳ ನೀರು ಶುದ್ಧೀಕರಣ ಘಟಕ ಸ್ಥಾಪನೆಗೊಳ್ಳಲಿದೆ ಎಂದು ಪಾಲಿಕೆ ಆಯುಕ್ತರು ನ್ಯಾಯಮೂರ್ತಿಯವರಿಗೆ ವಿವರಿಸಿದರು.

ತದನಂತರ ಅಂಧ್ರಹಳ್ಳಿ ಮತ್ತು ಲಿಂಗದೇಹಳ್ಳಿ ಕೆರೆಗಳಿಗೆ ಭೇಟಿ ನೀಡಿ, ಎರಡು ಕೆರೆಗಳ ಸುತ್ತಲು ತಂತಿಬೇಲಿ ನಿರ್ಮಿಸುವ ಕಾರ್ಯ ಪ್ರಗತಿಯಲ್ಲಿರುವುದನ್ನು ಗಮನಿಸಿದ ನ್ಯಾಯಮೂರ್ತಿಗಳು ಅಭಿವೃದ್ಧಿ ಕಾರ್ಯ ಇನ್ನು ತೀವ್ರಗೊಳಿಸಬೇಕು ಮತ್ತು ಕೆರೆಯ ಕೆಲಭಾಗದಲ್ಲಿ ಒತ್ತುವರಿಯಾಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ ಇನ್ನೊಮ್ಮೆ ಸರ್ವೆ ಮಾಡಿಸಿ, ನಿರ್ಧಾಕ್ಷಿಣ್ಯವಾಗಿ ಒತ್ತುವರಿಯನ್ನು ತೆರವುಗೊಳಿಸಬೇಕೆಂದು ಮುಖ್ಯ ಅಭಿಯಂತರರು (ಪರಿಸರ) ರವರಿಗೆ ಸೂಚಿಸಿದರು.

ಅಭಿವೃದ್ಧಿ ಪಡಿಸಲಾಗುತ್ತಿರುವ ಎಲ್ಲಾ ಕೆರೆಗಳ ಪ್ರಗತಿ ವರದಿಯನ್ನು ಛಾಯಾಚಿತ್ರ ಮತ್ತು ವಿಡಿಯೋಗ್ರಾಫ್ಸ್‌ಗಳೊಂದಿಗೆ ಒಂದು ವಾರದೊಳಗಾಗಿ ಸಮಿತಿಗೆ ಸಲ್ಲಿಸಲು ಕೂಡಾ ಸೂಚನೆ ನೀಡಿದರು. ಮುಂದಿನ 15 ದಿನಗಳಲ್ಲಿ ಗಣನೀಯವಾದ ಪ್ರಗತಿಯಾಗಬೇಕು. ಮತ್ತೊಮ್ಮೆ ಇದೇ ಕೆರೆಗಳಿಗೆ ಭೇಟಿ ನೀಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಪಾಲಿಕೆ ಆಯುಕ್ತರಾದ ಶ್ರೀ ಸಿದ್ದಯ್ಯ, ಬಿಡಿಎ ಆಯುಕ್ತರಾದ ಶ್ರೀ ಭರತ್‌ಲಾಲ್ ಮೀನಾ ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು–560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 25.06.2011**

ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ಶ್ರೀಮತಿ ಶಾರದಮ್ಮ ರವರು ಮೆಜೆಸ್ಟಿಕ್ ಪ್ರದೇಶದ ಉದ್ಯಾನವನಗಳು, ಪಾದಚಾರಿ ಮಾರ್ಗಗಳು, ಶೌಚಾಲಯಗಳ ಅವ್ಯವಸ್ಥೆಗಳ ಬಗ್ಗೆ ಪರಿಶೀಲನೆ ನಡೆಸಿದರು.

ಮೆಜೆಸ್ಟಿಕ್‌ನ 1 ಕಿ.ಮೀ. ವ್ಯಾಪ್ತಿಯ ಪ್ರದೇಶವನ್ನು "ಹೈಟೆಕ್ ಪ್ರದೇಶ"ವನ್ನಾಗಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನಿರ್ಧರಿಸಿದೆ. ಮೆಜೆಸ್ಟಿಕ್ ಪ್ರದೇಶದಲ್ಲಿರುವ ಸುರಂಗ ಮಾರ್ಗ, ಪಾದಚಾರಿ ಮಾರ್ಗ, ಉದ್ಯಾನವನಗಳಿಗೆ ಹೈಟೆಕ್ ಸ್ಪರ್ಶ ನೀಡಿ ಅತೀ ಸುಂದರವಾಗಿ ಕಾಣುವಂತೆ ಮಾಡಲು ಮುಂದಾಗಿದೆ ಎಂದು ಅವರು ತಿಳಿಸಿದರು. ಸದರಿ ಪ್ರದೇಶದಲ್ಲಿ ಸುಮಾರು 1 ಗಂಟೆಗಳ ಕಾಲ ತಪಾಸಣೆಯನ್ನು ನಡೆಸಿ, ಅವ್ಯವಸ್ಥೆಯನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಉಪ ಮಹಾಪೌರರಾದ ಶ್ರೀ ಎಸ್. ಹರೀಶ್ ರವರು ಮಾತನಾಡಿ, ಮೆಜೆಸ್ಟಿಕ್‌ನ 1 ಕಿ.ಮೀ ವ್ಯಾಪ್ತಿಯ ಪ್ರದೇಶವನ್ನು "ವಿಶೇಷ ವಲಯ"ವನ್ನಾಗಿ ರೂಪಿಸಿ ಅಲ್ಲಿ ಹೆಚ್ಚಿನ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಎಂದು ತಿಳಿಸಿದರು. ಈ ಸಂಬಂಧ ಸದ್ಯದಲ್ಲೇ ಪಾಲಿಕೆ ಆಯುಕ್ತರೊಂದಿಗೆ ಚರ್ಚಿಸಿ ವಿಶೇಷ ಪ್ಯಾಕೇಜ್ ರೂಪಿಸಿ ಮೆಜೆಸ್ಟಿಕ್ ಪ್ರದೇಶವನ್ನು ವಿಶ್ವದ ಗಮನ ಸೆಳೆಯುವಂತೆ ಹೈಟೆಕ್ ಪ್ರದೇಶವನ್ನಾಗಿಸಲಾಗುವುದು ಎಂದು ತಿಳಿಸಿದರು.

ಪಾಲಿಕೆ ಆಯುಕ್ತರು ಪಶ್ಚಿಮ ವಲಯದ ಅಧಿಕಾರಿಗಳಿಗೆ ಸೂಚನೆ ನೀಡಿ, ವಿವರವಾದ ಯೋಜನಾ ವರದಿ ಸಿದ್ಧಪಡಿಸಿ ಸಲ್ಲಿಸಲು ಮತ್ತು ತಕ್ಷಣವೇ ಅದಕ್ಕೆ ಅನುಮೋದನೆ ನೀಡುವುದಾಗಿ ತಿಳಿಸಿದರು. 4 ದಿನಗಳ ಹಿಂದೆ ಮಹಾಪೌರರು ಭೇಟಿ ನೀಡಿದಾಗ ಇಲ್ಲಿಯ ಪರಿಸ್ಥಿತಿ ತುಂಬಾ ಶೋಚನೀಯವಾಗಿತ್ತು. ನಾಲ್ಕು ದಿನಗಳಲ್ಲಿ ಸಾಕಷ್ಟು ಸ್ವಚ್ಛತೆ ಕ್ರಮ ಕೈಗೊಂಡಿದ್ದಕ್ಕೆ ಪ್ರಶಂಸೆ ವ್ಯಕ್ತಪಡಿಸಿದರು. ಅಧಿಕಾರಿಗಳು ಉತ್ತಮ ಕೆಲಸ ಮಾಡಿ ಅದಕ್ಕೆ ನನ್ನ ಬೆಂಬಲವಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**